ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ.ಸಂಖ್ಯೆ 57)<br>ನಮೂನೆ ಸಂಖ್ಯೆ 4 |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**
**ಸೆಷನ್ಸ್‌ಕೇಸ್ ನಂಬರ್ : 21/2021**

**ಫ್ರಾಸಾ- 4 ಚಾಸಾ- 5**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ರಾಜಶೆಟ್ಟಿ |
| ತಂದೆಯ ಹೆಸರುಃ | : | ನಂಜಶೆಟ್ಟಿ |
| ವಯಸ್ಸುಃ | : | 45 ವರ್ಷ |
| ಉದ್ಯೋಗಃ | : | ಕೂಲಿ |
| ವಾಸ | : | ಹಳೇಬೀಡು |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:25-11-2025:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ನಿಪಿ-3 ರಲ್ಲಿ ನನ್ನ ರುಜು ಇದೆ. ನಿಪಿ-3(ಬಿ) ಎಂದು ಗುರುತಿಸಲಾಯಿತು. ಈ ಸಹಿಯನ್ನು ಸುಮಾರು 5 ವರ್ಷಗಳ ಹಿಂದೆ ಹಳೇಬೀಡಿನಲ್ಲಿ ಜಾವಗಲ್ ರಸ್ತೆಯಲ್ಲಿ ಪೊಲೀಸರು ಪಡೆದುಕೊಡಂರು. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಪೊಲೀಸರು ಓದಿ ಹೇಳಲಿಲ್ಲ. ನಾನು ಓದಿ ನೋಡಲಿಲ್ಲ. ಮುಬಾರಕ್ ರವರ ಅಂಗಡಿ ಮುಂಭಾಗ ನನ್ನನ್ನು ಕರೆಸಲಿಲ್ಲ. ಅಲ್ಲಿ ಯಾವುದೇ ಮಹಜರು ಮಾಡಲಿಲ್ಲ. ನ್ಯಾಯಾಲಯದ ಮುಂದಿರುವ ಎಂ.ಒ.1 ರಿಂದ 3 ನ್ನು ಆ ಸಮಯದಲ್ಲಿ ನಾನು ನೋಡಲಿಲ್ಲ. ಅವುಗಳನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ**

ದಿನಾಂಕ 10-1-20ರಂದು ಪೊಲೀಸರು ಜಾವಗಲ್ ರಸ್ತೆಯ ಬದಿಯಲ್ಲಿರುವ ಮುಬಾರಕ್ ಇಂಜಿನಿಯರಿಂಗ್ ವರ್ಕ್ಸ್ ಬಳಿ ನನ್ನನ್ನು ಕರೆಸಿದ್ದರು ಎಂದರೆ ಸರಿ. ಅಲ್ಲಿ ಚಾಸಾ-3

ರವರು ಕೂಡ ಇದ್ದರು ಎಂದರೆ ಗೊತ್ತಿಲ್ಲ. ಅಲ್ಲಿ ಪೊಲೀಸರು ಬೆಳಿಗ್ಗೆ 8 ರಿಂದ 9 ಗಂಟೆವರೆಗೆ ನನ್ನ ಸಮಕ್ಷಮ ಪಂಚನಾಮೆ ಬರೆದು ಎಂ.ಒ.1 ರಿಂದ 3 ನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ಶ್ರೀ ಸಿ ಕೆ ವಕೀಲರಿಂದಃ**

ಇಲ್ಲವೆಂದು ಹೇಳುತ್ತಾರೆ

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**